# ಕ್ರಿಸ್ ಹಾಡ್ಜಸ್



ಕ್ರಿಸ್ ಹಾಡ್ಜಸ್ ಅವರು ಚೆನ್ನೈ ಅಮೇರಿಕ ದೂತಾವಾಸದ ಮುಖ್ಯಸ್ಥರಾಗಿದ್ದಾರೆ. ಅವರು ಇತ್ತೀಚೆಗೆ ಕೋಆರ್ಡಿನೇಟರ್ ಫಾರ್ ಆಫ್ಘನ್ ರಿಲೊಕೇಷನ್ ಎಫರ್ಟ್ಸ್(ಕೇರ್) ಕಚೇರಿಯ ಹಿರಿಯ ಸಲಹೆಗಾರರಾಗಿದ್ದರು. ಅದಕ್ಕೂ ಮುನ್ನ
ಬ್ಯೂರೋ ಫಾರ್ ನಿಯರ್ ಈಸ್ಟ್ರನ್ ಅಫೇರ್ಸ್ ನಲ್ಲಿ ಅಸಿಸ್ಟೆನ್ಸ್ ಕೋಆರ್ಡಿನೇಷನ್ ಅಂಡ್ ಪ್ರೆಸ್ ಅಂಡ್ ಪಬ್ಲಿಕ್ ಡಿಪ್ಲೊಮಸಿ ವಿಭಾಗದ ಡೆಪ್ಯುಟಿ ಅಸಿಸ್ಟೆಂಟ್ ಸೆಕ್ರೆಟರಿಯಾಗಿ ಕಾರ್ಯನಿರ್ವಹಿಸಿದ್ದರು. ಅವರು ಕಡೆಯದಾಗಿ ವಿದೇಶದಲ್ಲಿ ಕಾರ್ಯನಿರ್ವಹಿಸಿದ್ದು ಜೆರೂಸಲೇಂನ ರಾಯಭಾರ ಕಚೇರಿಯಲ್ಲಿ ಅಸಿಸ್ಟೆಂಟ್ ಡೆಪ್ಯುಟಿ ಛೀಫ್ ಆಫ್ ಮಿಷನ್ ಮತ್ತು ಛೀಫ್ ಆಫ್ ದಿ ಪ್ಯಾಲೆಸ್ತೇನಿಯನ್ ಅಫೇರ್ಸ್ ಯೂನಿಟ್ ನಲ್ಲಿ. ಅವರು 2000ರಲ್ಲಿ ವಿದೇಶಾಂಗ ಸೇವೆಗೆ ಸೇರಿಕೊಂಡರು. ಜೆರೂಸಲೇಂ, ಹನೊಯ್, ವಿಯೆಟ್ನಾಂ; ಮತ್ತು ಅಕ್ರ್ಯಾ, ಘಾನಾದಲ್ಲಿ ಪಬ್ಲಿಕ್ ಅಫೇರ್ಸ್ ಆಫೀಸರ್ ಆಗಿ ಅವರು ಸೇವೆ ಸಲ್ಲಿಸಿದ್ದಾರೆ. ಅಲ್ಲದೆ ಆಸ್ಟ್ರಿಯಾ, ಜರ್ಮನಿ, ಸ್ವಿಟ್ಜರ್ ಲೆಂಡ್ ಮತ್ತು ಲಿಷೆನ್ ಸ್ಟೀನ್ ಗಳಲ್ಲಿ ಆಫೀಸ್ ಆಫ್ ದಿ ಸೆಂಟ್ರಲ್ ಯೂರೋಪಿಯನ್ ಅಫೇರ್ಸ್ ನಲ್ಲಿ ಡೆಪ್ಯುಟಿ ಡೈರೆಕ್ಟರ್ ಆಗಿ ದುಡಿದಿದ್ದಾರೆ. ಸುವಾ, ಫಿಜಿ ಮತ್ತು ಫ್ರಾಂಕ್ ಫರ್ಟ್, ಜರ್ಮನಿಗಳಲ್ಲೂ ಕೆಲಸ ಮಾಡಿದ್ದಾರೆ.
ಕ್ರಿಸ್ ಅವರು ಜಾರ್ಜಿಯಾ ಟೆಕ್ ನಲ್ಲಿ ಇಂಟರ್ ನ್ಯಾಷನಲ್ ಅಫೇರ್ಸ್ ನಲ್ಲಿ ಬ್ಯಾಚಲರ್ ಆಫ್ ಸೈನ್ಸ್ ಪದವಿ ಹಾಗೂ ಜಾರ್ಜ್ ವಾಷಿಂಗ್ಟನ್ ಯೂನಿವರ್ಸಿಟಿ ಹಾಗೂ ಯು.ಎಸ್. ನೇವಲ್
ವಾರ್ ಕಾಲೇಜುಗಳಿಂದ ಕ್ರಮವಾಗಿ ಇಂಟರ್ ನ್ಯಾಷನಲ್ ಅಫೇರ್ಸ್ ಹಾಗೂ ಸ್ಟ್ರಾಟಜಿಕ್ ಸ್ಟಡೀಸ್ ನಲ್ಲಿ ಮಾಸ್ಟರ್ಸ್ ಆಫ್ ಆರ್ಟ್ಸ್ ಪದವಿಗಳನ್ನು ಪಡೆದಿದ್ದಾರೆ. ಅವರು 2018 ಎಡ್ವರ್ಡ್ ಆರ್. ಮುರ್ರೊ

ಅವಾರ್ಡ್ ಫಾರ್ ಪಬ್ಲಿಕ್ ಡಿಪ್ಲೊಮಸಿಯಲ್ಲಿ ರನ್ನರ್- ಅಪ್ ಆಗಿದ್ದಾರೆ ಮತ್ತು 2019ರಲ್ಲಿ ಪಬ್ಲಿಕ್ ಡಿಪ್ಲೊಮಸಿ ಅಲುಮ್ನಿ ಅಸೋಸಿಯೇಷನ್ ಫಾರ್ ಅಚೀವ್ ಮೆಂಟ್ ಇನ್ ಪಬ್ಲಿಕ್ ಡಿಪ್ಲೊಮಸಿಯ ಗೌರವ ಪಡೆದಿದ್ದಾರೆ.  ಕ್ರಿಸ್ ಅವರು ಜಾರ್ಜಿಯಾದ ಮಾರಿಯೆಟ್ಟಾದವರು. ಅವರು ವಿವಾಹಿತರಾಗಿದ್ದು, ಅವರಿಗೆ ಇಬ್ಬರು ಮಕ್ಕಳಿದ್ದಾರೆ.